DTE-ADMI0EST(12)/5/2023-JD-DEPT TECH EDUCATION

I/451907/2023

**ಕರ್ನಾಟಕ ಸರ್ಕಾರ**

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಆಯುಕ್ತರ ಕಛೇರಿ,

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,

ಬೆಂಗಳೂರು-560001.

ದಿನಾಂಕ:13.07.2023.

**ಸುತ್ತೋಲೆ**

**ವಿಷಯ:** 2020-21, 2021-22 ಹಾಗೂ 2022-23ನೇ ಸಾಲಿನ ಕಾರ್ಯನಿರ್ವಹಣಾ ವರದಿಯನ್ನು ಇ-ಫಾರ್ ನಲ್ಲಿ ಭರ್ತಿ ಮಾಡಿ ಸಲ್ಲಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಅನಧಿಕೃತ ಟಿಪ್ಪಣಿ ಸಂಖ್ಯೆ:ಸಿಆಸುಇ/124/ಕತವ/2019 ದಿ:18.08.2020.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಅನಧಿಕೃತ ಟಿಪ್ಪಣಿಯಲ್ಲಿ 2020-21ನೇ ಸಾಲಿನಿಂದ ಗ್ರೂಪ್-ಬಿ ಮತ್ತು ಗ್ರೂಪ್-ಸಿ ವೃಂದದ ಅಧಿಕಾರಿ/ಸಿಬ್ಬಂದಿಗಳ ಕಾರ್ಯನಿರ್ವಹಣಾ ವರದಿಗಳನ್ನು ಆನ್-ಲೈನ್-ನಲ್ಲಿ ಕಡ್ಡಾಯವಾಗಿ ದಾಖಲಿಸುವಂತೆ ತಿಳಿಸಿರುತ್ತಾರೆ. ಅದರಂತೆ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಗ್ರೂಪ್-ಎ, ಗ್ರೂಪ್-ಬಿ ಮತ್ತು ಗ್ರೂಪ್-ಸಿ ಅಧಿಕಾರಿಗಳು/ಸಿಬ್ಬಂದಿಗಳು ಕಾಲಕಾಲಕ್ಕೆ ಇ-ಫಾರ್ ಭರ್ತಿ ಮಾಡಬೇಕಾಗಿರುತ್ತದೆ. ಆದರೆ ಕೆಲವು ಅಧಿಕಾರಿಗಳು/ಸಿಬ್ಬಂದಿಗಳು ಇಲ್ಲಿಯವರೆಗೂ 2020-21 ಮತ್ತು 2021-22 ಇ-ಫಾರ್ ಭರ್ತಿ ಮಾಡದೇ ಇರುವುದು ಕಂಡುಬಂದಿರುತ್ತದೆ. ಆದ್ದರಿಂದ ಸಂಸ್ಥೆಯ ಮುಖ್ಯಸ್ಥರಾದ ಪ್ರಾಂಶುಪಾಲರು ಎಲ್ಲಾ ಅಧಿಕಾರಿಗಳು/ಸಿಬ್ಬಂದಿಗಳಿಂದ ಸದರಿ ಸಾಲುಗಳ ಕಾರ್ಯನಿರ್ವಹಣಾ ವರದಿಯನ್ನು ತಪ್ಪದೇ ಇ-ಫಾರ್-ನಲ್ಲಿ ಭರ್ತಿ ಮಾಡಿಸಲು ಕ್ರಮವಹಿಸಿ ಇ-ಫಾರ್ ಪ್ರಕ್ರೀಯೆ ತಮ್ಮ ಹಂತದವರೆಗೆ ಪೂರ್ಣಗೊಳಿಸಿ ಮುಂದಿನ ಹಂತಕ್ಕೆ ಕಳುಹಿಸಲು ತಿಳಿಸಲಾಗಿದೆ.

ಮುಂದುವರೆದು, ಸಂಸ್ಥೆಯ ಯಾವುದೇ ಅಧಿಕಾರಿ / ಸಿಬ್ಬಂದಿಯವರು ಯಾವುದೇ ಸಾಲಿನ ಇ-ಫಾರ್ ಭರ್ತಿ ಮಾಡದೇ ಇದ್ದಲ್ಲಿ, ಸಂಸ್ಥೆಯ ಪ್ರಾಂಶುಪಾಲರನೇ ನೇರ ಹೋಣೆಗಾರರನ್ನಾಗಿ ಮಾಡಿ ಶಿಸ್ತು ಕ್ರಮ ಜರೂಗಿಸಲಾಗುವುದೆಂದು ಈ ಮೂಲಕ ಸೂಚಿಸಿದೆ.

K.G. 13/07/23

ನಿರ್ದೇಶಕರು

ಇವರಿಗೆ,

ತಾಂತ್ರಿಕ ಶಿಕ್ಷಣ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್, ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರಿಗೆ - ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಪ್ರತಿ:

1. ಇ-ಆಡಳಿತ (ವೆಬ್ ಸೈಟ್-ನಲ್ಲಿ ಪ್ರಕಟಿಸಲು).
2. ಕಛೇರಿ ಪ್ರತಿ.